**All India Radio: Bangalore**
**National Bulletin In Kannada**
**16.04.2024 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.04.2024 07.35 a.m.**
****************

ಮುಖ್ಯಾಂಶಗಳು

೧. ವಿವಿಧ ರಾಜ್ಯಗಳಲ್ಲಿ ಚುರುಕುಗೊಂಡ ಚುನಾವಣಾ ಪ್ರಚಾರ; ಹಲವು ಮುಖಂಡರಿಂದ ಮತಯಾಚನೆ

೨. ಮೊದಲ ಹಂತದ ಲೋಕಸಭಾ ಚುನಾವಣೆಗೂ ಮುನ್ನ ದೇಶಾದ್ಯಂತ ದಾಖಲೆಯ ಅಕ್ರಮ ನಗದು ಮತ್ತಿತರ ವಸ್ತುಗಳ ವಶ

೩. ದೇಶದಲ್ಲಿ ಈ ಬಾರಿ ವಾಡಿಕೆಯಂತೆ ಸಾಮಾನ್ಯ ಮುಂಗಾರು - ಹವಾಮಾನ ಇಲಾಖೆ

೪. ಐಪಿಎಲ್ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್‌ಗೆ ೨೫ ರನ್ ಜಯ

****************

ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಬಿಹಾರದ ಗಯಾ ಮತ್ತು ಪೂರ್ನಿಯಾದಲ್ಲಿ ಎನ್‌ಡಿಎ ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ. ಗಯಾದಲ್ಲಿ ಬೆಳಗ್ಗೆ ನಡೆಯಲಿರುವ ಹಾಗೂ ಪೂರ್ನಿಯಾದಲ್ಲಿ ಮಧ್ಯಾಹ್ನ ನಡೆಯುವ ಸಾರ್ವಜನಿಕ ಸಭೆಗಳಲ್ಲಿ ಪ್ರಧಾನಿ ಮಾತನಾಡಲಿದ್ದಾರೆ.

ಬಳಿಕ ಪ್ರಧಾನಿ, ಅಸ್ಸಾಂನ ಗುವಾಹಟಿಯಲ್ಲಿಂದು ಚುನಾವಣಾ ಪ್ರಚಾರ ನಡೆಸಲಿದ್ದಾರೆ.

ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ಕೂಡ ಇಂದು ಅಸ್ಸಾಂನ ಜೊರ್ಹಾಟ್‌ನಲ್ಲಿ ರೋಡ್ ಶೋ ನಡೆಸಲಿದ್ದಾರೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕೇರಳದ ಕೋಳಿಕ್ಕೋಡ್‌ನಲ್ಲಿ ನಿನ್ನೆ ಸಂಜೆ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡರು. ಈ ವೇಳೆ ಎನ್‌ಡಿಎ ಪಕ್ಷಗಳ ಆಡಳಿತ ಮತ್ತು ಹೇಳಿಕೆಗಳ ಕುರಿತು ಅವರು ಅಸಮಧಾನ ವ್ಯಕ್ತಪಡಿಸಿದರು.

ಇದಕ್ಕೂ ಮುನ್ನ ಕೇರಳದ ವಯನಾಡ್, ಸುಲ್ತಾನ್ ಬತ್ತೇರಿ, ಪುಲ್ಪಲ್ಲಿ ಮತ್ತು ಮಾನಂತವಾಡಿಯಲ್ಲಿ ನಡೆದ ರೋಡ್ ಶೋಗಳಲ್ಲಿ ರಾಹುಲ್ ಗಾಂಧಿ ಭಾಗವಹಿಸಿ ಪಕ್ಷದ ಪರ ಮತಯಾಚಿಸಿದರು.

****************

ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಾಗಾಲ್ಯಾಂಡ್‌ಗೆ ಭೇಟಿ ನೀಡಿ, ದಿಮಾಪುರದಲ್ಲಿಂದು ನಡೆಯಲಿರುವ ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ. ನಾಗಾಲ್ಯಾಂಡ್, ಮಣಿಪುರ, ಸಿಕ್ಕಿಂ ಮತ್ತು ತ್ರಿಪುರಾ ರಾಜ್ಯಗಳ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಉಸ್ತುವಾರಿ ಗಿರೀಶ್ ಚೋಡಂಕರ್ ಈ ಕುರಿತು ಮಾಹಿತಿ ನೀಡದ್ದಾರೆ.

ಕೇಂದ್ರದಲ್ಲಿ ಈ ಬಾರಿ ಐಎನ್‌ಡಿಐಎ ಮೈತ್ರಿಕೂಟ ಸರ್ಕಾರ ರಚಿಸಲಿದ್ದು, ಪ್ರಧಾನಿ ನರೇಂದ್ರ ಮೋದಿಯವರ ನಕಲಿ ಭರವಸೆಗಳನ್ನು ಜನತೆ ನಂಬದಿರುವುದರಿಂದ ದೇಶದ ಮನಸ್ಥಿತಿ ಬದಲಾಗುತ್ತಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿಯ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ರಾಜನಾಥ್ ಸಿಂಗ್ ಇಂದು ತಮಿಳುನಾಡಿನಲ್ಲಿ ಸಾರ್ವಜನಿಕ ರ‍್ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ. ಇದೇ ವೇಳೆ ಅವರು ರಾಜ್ಯದ ಕೃಷ್ಣಗಿರಿ ಮತ್ತು ತಿರುವಣ್ಣಾಮಲೈನಲ್ಲಿ ರೋಡ್ ಶೋ ನಡೆಸಲಿದ್ದಾರೆ. ತಮಿಳುನಾಡಿನ ಎಲ್ಲಾ ೩೯ ಸ್ಥಾನಗಳಿಗೆ ಇದೇ ೧೯ ರಂದು ಮತದಾನ ನಡೆಯಲಿದೆ.

****************

ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತಾವು ತೆಗೆದುಕೊಳ್ಳುವ ಎಲ್ಲಾ ನಿರ್ಧಾರಗಳು ರಾಷ್ಟ್ರದ ಸಮಗ್ರ ಅಭಿವೃದ್ಧಿಯ ಪರವಾಗಿರುತ್ತವೆ ಎಂದು ಹೇಳಿದ್ದಾರೆ. ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ ನಿರ್ಮಿಸಲು ಎರಡು ವರ್ಷಗಳಿಂದ ಕೆಲಸ ನಡೆಯುತ್ತಿದೆ ಎಂದರು.

’ಒಂದು ರಾಷ್ಟ್ರ, ಒಂದು ಚುನಾವಣೆ’ ಜಾರಿಗೆ ತರುವುದು ತಮ್ಮ ಸರ್ಕಾರದ ಬದ್ಧತೆಯಾಗಿದ್ದು, ಇದರ ಕುರಿತು ವರದಿ ಸಿದ್ಧಪಡಿಸಲು ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿ ಸಕಾರಾತ್ಮಕ ಮತ್ತು ವಿನೂತನ ಸಲಹೆಗಳನ್ನು ಸ್ವೀಕರಿಸಿದೆ ಎಂದು ಅವರು ಹೇಳಿದರು.

ಚುನಾವಣಾ ಬಾಂಡ್ ಕುರಿತ ಪ್ರಶ್ನೆಗೆ ಉತ್ತರಿಸಿದ ಪ್ರಧಾನಿ ಮೋದಿ, ಇದು ಚುನಾವಣೆಯಲ್ಲಿ ಕಪ್ಪು ಹಣದ ಬಳಕೆಯ ವಿರುದ್ಧ ಹೋರಾಡಲು ಉದ್ದೇಶಿಸಲಾಗಿರುವ ಒಂದು ಕ್ರಮ ಎಂದು ಹೇಳಿದರು.

***************

೧೮ನೇ ಲೋಕಸಭೆಯ ಮೊದಲ ಹಂತದ ಚುನಾವಣೆಗೂ ಮುನ್ನವೇ ದೇಶಾದ್ಯಂತ ಚುನಾವಣಾ ಆಯೋಗ ಒಟ್ಟು ೪ ಸಾವಿರದ ೬೫೦ ಕೋಟಿ ರೂಪಾಯಿ ಮೊತ್ತದ ನಗದು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಂಡಿದೆ. ಇದು ದೇಶದ ೭೫ ವರ್ಷಗಳ ಚುನಾವಣಾ ಇತಿಹಾಸದಲ್ಲೇ ಅತ್ಯಂತ ಹೆಚ್ಚಿನದಾಗಿದೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ.

೨೦೧೯ರಲ್ಲಿ ೩ ಸಾವಿರದ ೪೭೫ ಕೋಟಿ ರೂಪಾಯಿಗಳನ್ನು ವಶಪಡಿಸಿಕೊಳ್ಳಲಾಗಿತ್ತು. ಮಾರ್ಚ್ ಒಂದರಿಂದ ಪ್ರತಿನಿತ್ಯ ಸುಮಾರು ೧೦೦ ಕೋಟಿ ರೂಪಾಯಿ ನಗದನ್ನು ವಶಪಡಿಸಿಕೊಳ್ಳಲಾಗುತ್ತಿದೆ ಎಂದು ಆಯೋಗ ಹೇಳಿದೆ.

ಕರ್ನಾಟಕದಲ್ಲಿ ಏಪ್ರಿಲ್ ೧೩ ರವರೆಗೆ ೩೫ ಕೋಟಿ ೫೩ ಲಕ್ಷ ೮೦ ಸಾವಿರದ ೭೦ ರೂಪಾಯಿ ನಗದು, ೧೮ ಕೋಟಿ ೭೫ ಲಕ್ಷಕ್ಕೂ ಹೆಚ್ಚು ಮೌಲ್ಯದ ಮಾದಕ ವಸ್ತು, ೬೦ ಕೋಟಿ ೮೬ ಲಕ್ಷ ಮೌಲ್ಯದ ಉಚಿತ ಕೊಡುಗೆಗಳು ಸೇರಿದಂತೆ ಒಟ್ಟಾರೆ ೨೮೧ ಕೋಟಿ ೪೩ ಲಕ್ಷ ರೂಪಾಯಿ ಮೌಲ್ಯದ ನಗದು ಹಾಗೂ ಮತ್ತಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಯೋಗ ಮಾಹಿತಿ ನೀಡಿದೆ.

***************

ಬ್ರಿಟನ್‌ನ ಉನ್ನತ ಮಟ್ಟದ ನಿಯೋಗ ನವದೆಹಲಿಯ ಸಿಬಿಐ ಪ್ರಧಾನ ಕಚೇರಿಗೆ ನಿನ್ನೆ ಭೇಟಿ ನೀಡಿತು. ನಿಯೋಗದಲ್ಲಿ ಇಂಟರ್ ಪೋಲ್ ಪೊಲೀಸ್ ಸೇವೆಗಳ ಕಾರ್ಯನಿರ್ವಾಹಕ ನಿರ್ದೇಶಕ

ಸ್ಟೀಫನ್ ಕವನಾಗ್ ಮತ್ತು ಇಂಟರ್ ಪೋಲ್‌ನ ಪ್ರಧಾನ ಕಾರ್ಯದರ್ಶಿ ಹುದ್ದೆಯ ಅಭ್ಯರ್ಥಿ ಕ್ರಿಸ್ಟಿನಾ ಸ್ಕ್ಯಾಟ್, ರಾಷ್ಟ್ರೀಯ ಅಪರಾಧ ಏಜೆನ್ಸಿಯ ರಾಬರ್ಟ್ ಹೋಲ್ಮೆಸ್ ಮತ್ತು ಬ್ರಿಟನ್ ಗೃಹ ಕಚೇರಿಯ ಸೋರೆಲ್ ಇವಾನ್ಸ್ ಮತ್ತಿತರರು ಇದ್ದರು.

ಈ ವೇಳೆ ನಿಯೋಗ, ಸಿಬಿಐ ನಿರ್ದೇಶಕರಾದ ಪ್ರವೀಣ್ ಸೂದ್ ಮತ್ತು ಹಿರಿಯ ಅಧಿಕಾರಿಗಳೊಂದಿಗೆ, ಆರ್ಥಿಕ ಅಪರಾಧಗಳು, ಸಂಘಟಿತ ಅಪರಾಧ, ಭಯೋತ್ಪಾದನೆ, ಸೈಬರ್ ಅಪರಾಧಗಳನ್ನು ಎದುರಿಸುವ ಪ್ರಯತ್ನಗಳಲ್ಲಿ ಪರಸ್ಪರ ಬೆಂಬಲಿಸುವ ಕುರಿತು ವಿವರವಾದ ಚರ್ಚೆ ನಡೆಸಿತು.

****************

ಈ ವರ್ಷ ದೇಶದಲ್ಲಿ ವಾಡಿಕೆಯಂತೆ ಸಾಮಾನ್ಯ ಮುಂಗಾರು ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ನವದೆಹಲಿಯಲ್ಲಿ ನೈಋತ್ಯ ಮಾನ್ಸೂನ್ ಋತುವಿನ ಮಳೆಯ ಮುನ್ಸೂಚನೆ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಭೂ ವಿಜ್ಞಾನ ಸಚಿವಾಲಯದ ಕಾರ್ಯದರ್ಶಿ ಡಾ.ಎಂ.ರವಿಚಂದ್ರನ್, ಜೂನ್‌ನಿಂದ, ಸೆಪ್ಟೆಂಬರ್‌ವರೆಗಿನ ಮಾನ್ಸೂನ್ ಮಳೆಯು ದೀರ್ಘಾವಧಿಯ ಸರಾಸರಿಯ ೧೦೬ ಪ್ರತಿಶತದಷ್ಟು ಇರುತ್ತದೆ ಎಂದು ಹೇಳಿದ್ದಾರೆ.

ಆದರೂ ವಾಯುವ್ಯ, ಪೂರ್ವ ಮತ್ತು ಈಶಾನ್ಯ ರಾಜ್ಯಗಳ ಕೆಲವು ಪ್ರದೇಶಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಮಾತನಾಡಿದ ಭಾರತೀಯ ಹವಾಮಾನ ಇಲಾಖೆಯ ಮಹಾ ನಿರ್ದೇಶಕ ಮೃತ್ಯುಂಜಯ್ ಮೊಹಾಪಾತ್ರ, ದೇಶಾದ್ಯಂತ ಜೂನ್ ೧ ರಿಂದ, ಸೆಪ್ಟೆಂಬರ್ ೩೦ ರವರೆಗೆ ಸರಾಸರಿ ೮೭ ಸೆಂ.ಮೀ ಮಳೆಯಾಗಲಿದೆ ಎಂದು ಹೇಳಿದರು. ಮಾನ್ಸೂನ್ ಋತುವಿನ ಆರಂಭದಲ್ಲಿ ಎಲ್‌ನಿನೋ ಪರಿಸ್ಥಿತಿಗಳು ದುರ್ಬಲಗೊಳ್ಳುವ ಸಾಧ್ಯತೆಯಿದೆ ಎಂದ ಅವರು, ಭಾರತದಲ್ಲಿ ಉತ್ತಮ ಮಾನ್ಸೂನ್‌ಗೆ ಸಂಬಂಧಿಸಿದ ಪರಿಸ್ಥಿತಿಗಳು ಆಗಸ್ಟ್‌ನಿಂದ ಸೆಪ್ಟೆಂಬರ್ ನಡುವೆ ಅಭಿವೃದ್ಧಿಗೊಳ್ಳುತ್ತವೆ ಎಂದು ಹೇಳಿದರು.

****************

ಭಾರತ-ಉಜ್ಬೇಕಿಸ್ತಾನ ಜಂಟಿ ಸಮಾರಾಭ್ಯಾಸ- ಡಸ್ಲಿಕ್ ನಿನ್ನೆಯಿಂದ ಆರಂಭಗೊಂಡಿದ್ದು, ಇದೇ ೨೧ರವರೆಗೆ ಉಜ್ಬೇಕಿಸ್ತಾನದಲ್ಲಿ ನಡೆಯಲಿದೆ. ಭಾರತದ ಸಶಸ್ತ್ರ ಪಡೆಯ ಸುಮಾರು ೬೦ ಸಿಬ್ಬಂದಿ ಹಾಗೂ ಉಜ್ಬೇಕಿಸ್ತಾನದಿಂದ ಸುಮಾರು ೧೦೦ ಸಿಬ್ಬಂದಿ ಸಮರಾಭ್ಯಾಸದಲ್ಲಿ ಭಾಗಿಯಾಗಿದ್ದಾರೆ.

ಈ ಜಂಟಿ ಸಮಾರಾಭ್ಯಾಸ ಮಿಲಿಟರಿ ಸಹಕಾರವನ್ನು ಸದೃಢಗೊಳಿಸುವ ಗುರಿ ಹೊಂದಿದೆ. ಉಭಯ ದೇಶಗಳ ರಕ್ಷಣಾ ಸಿಬ್ಬಂದಿಯ ದೈಹಿಕ ಸಾಮರ್ಥ್ಯ, ಜಂಟಿ ಯೋಜನೆ, ಜಂಟಿ ಯುದ್ಧ ತಂತ್ರ ಮತ್ತು ವಿಶೇಷ ಸಶಸ್ತ್ರ ಕೌಶಲ್ಯಗಳನ್ನು ಈ ಸಮಾರಾಭ್ಯಾಸ ಒಳಗೊಂಡಿದೆ.

****************

ಭಾರತ ಮತ್ತು ತಾಷ್ಕೆಂಟ್ ನಡುವಿನ ರಕ್ಷಣಾ ಸಹಕಾರವನ್ನು ಹೆಚ್ಚಿಸಲು ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ ಉಜ್ಬೇಕಿಸ್ತಾನ್‌ಗೆ ನಾಲ್ಕು ದಿನಗಳ ಭೇಟಿ ಕೈಗೊಂಡಿದ್ದಾರೆ.

ತಮ್ಮ ಭೇಟಿಯ ಸಂದರ್ಭದಲ್ಲಿ ಅವರು, ಉನ್ನತ ಸೇನಾಧಿಕಾರಿಗಳೊಂದಿಗೆ ಮಾತುಕತೆ ನಡೆಸುವುದಲ್ಲದೆ, ಭಾರತ ಮತ್ತು ಉಜ್ಬೇಕಿಸ್ತಾನ್ ಸಶಸ್ತ್ರ ಪಡೆಗಳ ನಡುವಿನ ಜಂಟಿ ಸಮರಾಭ್ಯಾಸ ಡಸ್ಲಿಕ್ ಅನ್ನು ವೀಕ್ಷಿಸಲು ಇದೇ ೧೮ ರಂದು ಟರ್ಮೆಜ್‌ಗೆ ಭೇಟಿ ನೀಡಲಿದ್ದಾರೆ.

ಸವಾಲುಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಎದುರಿಸಲು ಉಭಯ ದೇಶಗಳ ಸೇನೆ ಮತ್ತು ರಕ್ಷಣಾ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಸೇನಾ ಮುಖ್ಯಸ್ಥರ ಈ ಭೇಟಿ ಪ್ರಾಮುಖ್ಯತೆ ನೀಡಲಿದೆ. ಉಕ್ರೇನ್ ಸಂಘರ್ಷದ ಹೊರತಾಗಿ, ಭಯೋತ್ಪಾದನೆಯ ವಿಷಯ ಮಾತುಕತೆಯ ಸಮಯದಲ್ಲಿ ಪ್ರಮುಖವಾಗಿ ಪ್ರಸ್ತಾಪಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ.

****************

ಕುವೈತ್‌ನ ನೂತನ ಪ್ರಧಾನ ಮಂತ್ರಿಯಾಗಿ ಅಹ್ಮದ್ ಅಬ್ದುಲ್ಲಾ ಅಲ್-ಅಹ್ಮದ್ ಅಲ್-ಸಬಾಹ್ ಅವರನ್ನು ನೇಮಕ ಮಾಡಲಾಗಿದೆ.

ಇದೇ ೪ ರಂದು ಹೊಸ ಸಂಸತ್ತಿನ ಚುನಾವಣೆಯ ನಂತರ ಶೇಖ್ ಮೊಹಮ್ಮದ್ ಅವರು ತಮ್ಮ ಸಂಪುಟದ ರಾಜೀನಾಮೆಯನ್ನು ಇದೇ ೬ ರಂದು ಸಲ್ಲಿಸಿದ್ದರು.

ಈ ಮೊದಲು ಅಹ್ಮದ್ ಅಬ್ದುಲ್ಲಾ ೧೯೯೯ ರಿಂದ ೨೦೦೫ ರವರೆಗೆ ಹಣಕಾಸು ಮತ್ತು ಸಂವಹನ ಸಚಿವರಾಗಿದ್ದರು, ೨೦೦೬ ರಿಂದ ೨೦೧೧ ರವರೆಗೆ ಆರೋಗ್ಯ, ತೈಲ ಮತ್ತು ಮಾಹಿತಿ ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ.

****************

ಕಳೆದ ಮೂರು ದಿನಗಳಲ್ಲಿ ಪಾಕಿಸ್ತಾನದಾದ್ಯಂತ ಸುರಿದ ಭಾರೀ ಮಳೆ ಹಾಗೂ ಸಿಡಿಲಿಗೆ ಕನಿಷ್ಠ ೩೬ ಜನರು ಸಾವನ್ನಪ್ಪಿದ್ದಾರೆ. ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ಪಾಕಿಸ್ತಾನದ ನೈಋತ್ಯ ಭಾಗದಲ್ಲಿ ಅಧಿಕಾರಿಗಳು ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ. ಪಾಕಿಸ್ತಾನದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಮುಂದಿನ ದಿನಗಳಲ್ಲಿ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಮತ್ತಷ್ಟು ಭೂಕುಸಿತ ಮತ್ತು ಹಠಾತ್ ಪ್ರವಾಹದ ಎಚ್ಚರಿಕೆ ನೀಡಿದೆ.

****************

ಐಪಿಎಲ್ ಕ್ರಿಕೆಟ್‌ನಲ್ಲಿ ನಿನ್ನೆ ರಾತ್ರಿ ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ೨೫ ರನ್‌ಗಳಿಂದ ಸೋಲಿಸಿದೆ.

೨೮೮ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೬೨ ರನ್ ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿತು.

ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ದಿನೇಶ್ ಕಾರ್ತಿಕ್ ೩೫ ಎಸೆತಗಳಲ್ಲಿ ೮೩ ರನ್ ಗಳಿಸಿದರು. ನಾಯಕ ಫಾಫ್ ಡು ಪ್ಲೆಸಿಸ್ ೨೮ ಎಸೆತಗಳಲ್ಲಿ ೬೨ ರನ್ ಗಳಿಸಿದರೆ, ವಿರಾಟ್ ಕೊಹ್ಲಿ ೨೦ ಎಸೆತಗಳಲ್ಲಿ ೪೨ ರನ್ ಗಳಿಸಿದರು.

ಸನ್‌ರೈಸರ್ಸ್ ಹೈದರಾಬಾದ್ ಪರ ಪ್ಯಾಟ್ ಕಮ್ಮಿನ್ಸ್ ಮೂರು, ಮಯಾಂಕ್ ಮಾರ್ಕಂಡೆ ಎರಡು ಹಾಗೂ ಟಿ ನಟರಾಜನ್ ಒಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್ ನಿಗದಿತ ೨೦ ಓವರ್ ಗಳಲ್ಲಿ ಮೂರು ವಿಕೆಟ್ ನಷ್ಟಕ್ಕೆ ದಾಖಲೆಯ ೨೮೭ ರನ್ ಗಳಿಸಿತು.

ಸನ್‌ರೈಸರ್ಸ್ ಹೈದರಾಬಾದ್ ಪರ ಟ್ರಾವಿಸ್ ಹೆಡ್ ೪೧ ಎಸೆತಗಳಲ್ಲಿ ೧೦೨ ರನ್ ಗಳಿಸಿದರೆ, ಹೆನ್ರಿಚ್ ಕ್ಲಾಸೆನ್ ೬೭ ರನ್ ಗಳಿಸಿದರು. ಟ್ರಾವಿಸ್ ಹೆಡ್ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದರು.

ಏಡೆನ್ ಮಾರ್ಕ್ರ್ಯಾಮ್ ೩೨, ಅಬ್ದುಲ್ ಸಮದ್ ೩೭ ರನ್ ಗಳಿಸಿದರು. ಅಂಕಪಟ್ಟಿಯಲ್ಲಿ ಸನ್‌ರೈಸರ್ಸ್ ಹೈದರಾಬಾದ್ ೪ನೇ ಸ್ಥಾನದಲ್ಲಿದ್ದರೆ, ಆರ್‌ಸಿಬಿ ಅಂಕಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿದೆ.

ಕೋಲ್ಕತ್ತಾದ ಈಡನ್ ಗಾರ್ಡನ್‌ನಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಸೆಣಸಲಿವೆ. ಪಂದ್ಯ ಸಂಜೆ ೭:೩೦ಕ್ಕೆ ಆರಂಭವಾಗಲಿದೆ.

***************